“ಯಾರು ಇತರರಿಗೆ ದಯೆ ತೋರುವುದಿಲ್ಲವೋ ಅವರಿಗೆ ಸರ್ವಶಕ್ತನಾದ ಅಲ್ಲಾಹು ದಯೆ ತೋರುವುದಿಲ್ಲ.”

ಜರೀರ್ ಬಿನ್ ಅಬ್ದುಲ್ಲಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು
ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ)
ಹೇಳಿದರು: “ಯಾರು ಇತರರಿಗೆ ದಯೆ ತೋರುವುದಿಲ್ಲವೋ ಅವರಿಗೆ ಸರ್ವಶಕ್ತನಾದ ಅಲ್ಲಾಹು ದಯೆ ತೋರುವುದಿಲ್ಲ.”
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಯಾರು ಮನುಷ್ಯರಿಗೆ ದಯೆ ತೋರುವುದಿಲ್ಲವೋ ಅವರಿಗೆ ಸರ್ವಶಕ್ತನಾದ ಅಲ್ಲಾಹು ದಯೆ ತೋರುವುದಿಲ್ಲ. ಅಲ್ಲಾಹನ ದಯೆಯನ್ನು ಪಡೆಯುವ ಅತಿದೊಡ್ಡ ಮಾರ್ಗವು ಸಹಜೀವಿಗಳಿಗೆ ದಯೆ ತೋರುವುದಾಗಿದೆ.

https://sunnah.global/hadeeth/kn/show/5439